**ಪ್ರ ದ ನ್ಯಾದಂಡಾಧಿಕಾರಿಗಳ ನ್ಯಾಯಾಲಯ, ಕುಶಾಲನಗರ**

**ಸಿ ಸಿ ನಂಃ 525/2020**

ಚಾಸಾ 8ಃ

ಪ್ರಾಸಾ ಃ 5

ಸಾಕ್ಷಿಯ ಹೆಸರು: ರಾಜೇಶ್ ಹೆಚ್ ಎಂ

ತಂದೆ /ಗಂಡನ ಹೆಸರು : ಮಹಾದೇವಪ್ಪ

ವಯಸ್ಸು : 51

ಉದ್ಯೋಗ : ಎ ಎಸ್ ಐ , ಸಿದ್ದಾಪುರ ಪೋಲಿಸ್ ಠಾಣೆ

ವಾಸ ಸ್ಥಳ : ಸಿದ್ದಾಪುರ

**ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಿ ಪ್ರಮಾಣೀಕರಿಸಿದ ದಿಃ 09.02.2026**

**ಮುಖ್ಯ ವಿಚಾರಣೆಃ ಎ ಪಿ ಪಿ ಯವರಿಂದ**

ನಾನು 2014 ರಿಂದ 2020 ರವರೆಗೆ ಕುಶಾಲನಗರ ಟೌನ್ ಪೋಲಿಸ್ ಠಾಣೆಯಲ್ಲಿ ಮುಖ ಪೆದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 25.01.2020 ರಂದು ನಾನು ಠಾಣಾ ಪ್ರಬಾರದಲ್ಲಿದ್ದಾಗ ಚಾಸಾ 1 ರವರು ಮದ್ಯಾಹ್ಞ 1.00 ಗಂಟೆಗೆ ಠಾಣೆಗೆ ಹಾಜರಾಗಿ ಕೊಟ್ಟ ಲಿಖಿತ ದೂರನ್ನು ಹೊಂದಿಕೊಂಡು ಠಾಣಾ ಮೊ ಸಂ 3/2020 ರಂತೆ ಪ್ರಕರಣವನ್ನು ದಾಖಲಿಸಿ ನ್ಯಾಯಾಲಯಕ್ಕೆ ಹಾಗೂ ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ನಂತರ ಪ್ರಕರಣದ ತನಿಖೆಯನ್ನು ಮುಂದುವರೆಸಿ ಅದೆ ದಿನ ಸಂಜೆ 4.00 ಗಂಟೆ ಕೃತ್ಯ ಸ್ಥಳಕ್ಕೆ ಹೋಗಿ ಪಂಚರಾದ ಚಾಸಾ 2 ಮತ್ತು 4 ರವರನ್ನು ಬರಮಾಡಿಕೊಂಡು ಅವರ ಸಮಕ್ಷಮ ಕೃತ್ಯ ಸ್ಥಳದ ಮಹಜರ ಕ್ರಮವನ್ನು ಜರುಗಿಸಿರುತ್ತೇನೆ. ನಂತರ ಪ್ರಕರಣವನ್ನು ಖುದ್ದಾಗಿ ನೋಡಿದ ಸಾಕ್ಷಿದಾರರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ಚಾಸಾ 2 ಮತ್ತು 4 ರವರ ಹೇಳಿಕೆಯನ್ನು

ಪಡೆದುಕೊಂಡಿರುತ್ತೇನೆ. ನಂತರ ಮುಂದಿನ ತನಿಖೆಗಾಗಿ ಚಾಸಾ 9 ರವರಿಗೆ ಕಡತವನ್ನು ಹಸ್ತಾಂತರಿಸಿರುತ್ತೇನೆ.

ಸಾಕ್ಷಿಗೆ ದೂರನ್ನು ತೋರಿಸಲಾಗಿ ಸಾಕ್ಷಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸದರಿ ದೂರನ್ನು ಈಗಾಗಲೆ ನಿಪಿ 1 ಎಂದು ಗುರುತಿಸಿದ್ದು , ಸಾಕ್ಷಿಯ ಸಹಿಯನ್ನು ನಿಪಿ 1ಬಿ ಎಂದು ಗುರುತಿಸಲಾಯಿತು. ಸಾಕ್ಷಿಗೆ ಪ್ರ ವ ವ ನ್ನು ತೋರಿಸಲಾಗಿ ಸಾಕ್ಷಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸದರಿ ಪ್ರ ವ ವ ನ್ನು ನಿಪಿ 7 ಎಂದು, ಸಾಕ್ಷಿಯ ಸಹಿಯನ್ನು ನಿಪಿ 7ಎ ಎಂದು ಗುರುತಿಸಲಾಯಿತು. ಸಾಕ್ಷಿಗೆ ಪಂಚನಾಮೆಯನ್ನು ತೋರಿಸಲಾಗಿ ಸಾಕ್ಷಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸದರಿ ಪಂಚನಾಮೆಯನ್ನು ಈಗಾಗಲೆ ನಿಪಿ 2 ಎಂದು ಗುರುತಿಸಿದ್ದು , ಸಾಕ್ಷಿಯ ಸಹಿಯನ್ನು ನಿಪಿ 2ಡಿ ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಆರೋಪಿ ಪರ ಶ್ರೀ ಹೆಚ್ ಸಿ ಎಂ ಕೆ ವಕೀಲರಿಂದ

ಈ ರೀತಿ ಯಾವುದೆ ಘಟನಾ ನಡೆಯದೆ ಇದ್ದರೂ ಸುಳ್ಳು ಪ್ರಕರಣ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿ ಮತ್ತು ಚಾಸಾ 1 ರವರ ಮಧ್ಯೆ ನಡೆಯುತ್ತಿದ್ದ ಜೀವನಾಂಶದ ಪ್ರಕರಣಕ್ಕೆ ಅನುಕೂಲವಾಗಲಿ ಎಂದು ಈ ಸುಳ್ಳು ಪ್ರಕರಣವನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಯಾವುದೆ ಸ್ಥಳಕ್ಕೆ ಹೋಗದೆ ನಿಪಿ 2 ನ್ನು ಠಾಣೆಯಲ್ಲಿ ಕುಳಿತು ತಯಾರು ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಿಪಿ 2 ರಲ್ಲಿ ಸ್ಥಳದ ಅಕ್ಷಾಂಶ ಮತ್ತು ರೇಕಾಂಶ ಇರುವುದಿಲ್ಲ ಎಂದರೆ ಸರಿ . ನಮ್ಮ ಇಲಾಖೆಯಲ್ಲಿ ಅಕ್ಷಾಂಶ ಮತ್ತು ರೇಕಾಂಶವನ್ನು ನಮೂದು ಮಾಡಬೆಕೇಂದು ಅಧಿಸೂಚನೆ ಇರುತ್ತದೆ ಎಂದರೆ ಸರಿ . ನಾನು ಸ್ಥಳಕ್ಕೆ ಹೋಗದೆ ಇರುವ ಕಾರಣಈ ವಿವರಗಳನ್ನು ನಮೂದು ಮಾದೆ ಠಾಣೆಯಲ್ಲಿ ನಿಪಿ 2 ನ್ನು

ತಯಾರು ಮಾಡಿ ಪಂಚರ ಸಹಿಯನ್ನು ಠಾಣೆಯಲ್ಲಿ ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಯಾವುದೆ ಸಾಕ್ಷಿದಾರರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಎಲ್ಲಾ ದಾಖಲಾತಿಗಳನ್ನು ಈ ಪ್ರಕಣಕೋಸ್ಕರ ಸೃಷ್ಟಿಸಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿದೆ.)

ಓದಿ ಹೇಳಿ ಕೇಳಿ ಸರಿ ಇದೆ.

ಸಹಿ/-

ಪ್ರ ದ ನ್ಯಾದಂ, ಕುಶಾಲನಗರ.